ಕರ್ನಾಟಕ ಸರ್ಕಾರ

ಸಂಖ್ಯೆ: ಆಇ 26 ಮುಭನಿ 2013

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಧಾನ ಸೌಧ,
ಬೆಂಗಳೂರು, ದಿನಾಂಕ:30.09.2013.

## ಸುತ್ತೋಲೆ

ವಿಷಯ: ಕರ್ನಾಟಕ ಸಾಮಾನ್ಯ ಭವಿಷ್ಯ ನಿಧಿಗೆ ವಂತಿಗೆ ನೀಡುವುದನ್ನು ಕಡ್ಡಾಯಗೊಳಿಸುವ ಬಗ್ಗೆ

ಉಲ್ಲೇಖ: 1. ಅಧಿಸೂಚನೆ ಸಂಖ್ಯೆ:ಎಫ್.ಡಿ.48ಮುಭನಿ2001, ದಿ: 08.03.2002.

2. ಸರ್ಕಾರಿ ಆದೇಶ ಸಂಖ್ಯೆ:FD(SPL) 04 PET 2005, ದಿ:31.03.2006.

–0–

1. ಕರ್ನಾಟಕ ಸಾಮಾನ್ಯ ಭವಿಷ್ಯ ನಿಧಿ ನಿಯಮಗಳು, 1957ಕ್ಕೆ ತಿದ್ದುಪಡಿ ಮಾಡಿ ಉಲ್ಲೇಖ (1)ರಲ್ಲಿನ ಅಧಿಸೂಚನೆ ಮೂಲಕ ದಿನಾಂಕ:01.06.2002ರಿಂದ ಜಾರಿಗೆ ಬರುವಂತೆ ಎಲ್ಲಾ ರಾಜ್ಯ ಸರ್ಕಾರಿ ನೌಕರರುಗಳು ಸಾಮಾನ್ಯ ಭವಿಷ್ಯ ನಿಧಿಗೆ ವಂತಿಗೆ ನೀಡುವುದು ಕಡ್ಡಾಯ ಮಾಡಲಾಗಿದೆ. ರಾಜ್ಯ ಸಿವಿಲ್ ಸೇವೆಗೆ ದಿನಾಂಕ:01.04.2006ರಿಂದ ಹೊಸದಾಗಿ ನೇಮಕಗೊಳ್ಳುವ ಸರ್ಕಾರಿ ನೌಕರರುಗಳಿಗೆ ನೂತನ ಪಿಂಚಣಿ ಯೋಜನೆಯ ಕಡ್ಡಾಯವಾಗಿರುವುದರಿಂದ ಸಾಮಾನ್ಯ ಭವಿಷ್ಯ ನಿಧಿಯ ಏರ್ಪಾಡುಗಳು ದಿನಾಂಕ:01.04.2006ರಂದು ಅಥವಾ ಅದರ ತರುವಾಯ ಸೇವೆಗೆ ಸೇರುವವರಿಗೆ ದೊರೆಯತಕ್ಕದ್ದಲ್ಲ ವೆಂದು ಉಲ್ಲೇಖ (2)ರಲ್ಲಿನ ಸರ್ಕಾರಿ ಆದೇಶದಲ್ಲಿ ಆದೇಶಿಸಲಾಗಿದೆ.

2. ಆದರೆ, ನೂತನ ಪಿಂಚಣಿ ಯೋಜನೆಯ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ ನೌಕರರನ್ನು ಹೊರತುಪಡಿಸಿ ಉಳಿದ ರಾಜ್ಯ ಸರ್ಕಾರಿ ನೌಕರರುಗಳಿಗೆ ದಿನಾಂಕ:01.06.2002ರಿಂದ ಸಾಮಾನ್ಯ ಭವಿಷ್ಯ ನಿಧಿ ವಂತಿಕೆ ನೀಡುವುದು ಕಡ್ಡಾಯ ಮಾಡಲಾಗಿದ್ದರೂ ಸಹ, ಸಾಮಾನ್ಯ ಭವಿಷ್ಯ ನಿಧಿ ನಿಯಮಗಳಡಿ ಚಂದಾದಾರರಾಗಲೂ ಮಹಾಲೇಖಪಾಲರ ಕಛೇರಿಗೆ ಈಗಲೂ ಅರ್ಜಿಗಳು ಬರುತ್ತಿರುವುದಾಗಿ ಮಹಾಲೇಖಪಾಲರು ತಿಳಿಸಿರುತ್ತಾರೆ. ಅಂದರೆ, ಕರ್ನಾಟಕ ಸಾಮಾನ್ಯ ಭವಿಷ್ಯ ನಿಧಿ ನಿಯಮಗಳು, 1957ರ ಪ್ರಕಾರ ರಾಜ್ಯ ಸರ್ಕಾರಿ ನೌಕರರು ಸಾಮಾನ್ಯ ಭವಿಷ್ಯ ನಿಧಿಗೆ ವಂತಿಕೆ ನೀಡುವುದು ಕಡ್ಡಾಯ ಮಾಡಲಾಗಿದ್ದರೂ ಸಹ, ವಂತಿಕೆಯನ್ನು ವೇತನದಿಂದ ಕಟಾಯಿಸದೇ, ಸರ್ಕಾರಿ ನೌಕರರಿಗೆ ವೇತನವನ್ನು ಪಾವತಿ ಮಾಡುತ್ತಿರುವ ಅಂಶವು ಹಾಗೂ ಇಂತಹ ಸುಮಾರು 57,000 ಸರ್ಕಾರಿ ನೌಕರರ ಪ್ರಕರಣಗಳಿವೆ ಎಂದು ಸರ್ಕಾರದ ಗಮನಕ್ಕೆ ಬಂದಿದೆ.

..... 2

ಆದುದರಿಂದ ಎಲ್ಲಾ ಹಣ ಸೆಳೆಯುವ ಮತ್ತು ಬಟವಾಡೆ ಮಾಡುವ ಅಧಿಕಾರಿಗಳಿಗೆ (Drawing and Disbursing Officer) ಈ ಕೆಳಕಂಡ ಸೂಚನೆಯನ್ನು ನೀಡಲಾಗಿದೆ.

3. ಕರ್ನಾಟಕ ಸಾಮಾನ್ಯ ಭವಿಷ್ಯ ನಿಧಿ ನಿಯಮಗಳು, 1957ರಡಿ ರಾಜ್ಯ ಸರ್ಕಾರಿ ನೌಕರರುಗಳಿಗೆ ದಿನಾಂಕ:01.06.2002ರಿಂದ ಸಾಮಾನ್ಯ ಭವಿಷ್ಯ ನಿಧಿ ವಂತಿಕೆ ನೀಡುವುದು ಕಡ್ಡಾಯ ಮಾಡಲಾಗಿರುವುದರಿಂದ, ನೂತನ ಪಿಂಚಣಿ ವ್ಯವಸ್ಥೆಯಡಿ ಬರುವ ಸರ್ಕಾರಿ ನೌಕರರುಗಳನ್ನು ಹೊರತುಪಡಿಸಿ, ತಮ್ಮ ವ್ಯಾಪ್ತಿಯಲ್ಲಿ ಬರುವ ಉಳಿದ ಎಲ್ಲಾ ಅಧಿಕಾರಿ/ಸಿಬ್ಬಂದಿಗಳ ವೇತನದಿಂದ ಸಾಮಾನ್ಯ ಭವಿಷ್ಯ ನಿಧಿ ವಂತಿಕೆ ಕಡಿತ ಮಾಡಲಾಗುತ್ತಿದೆಯೇ ಎಂದು ಪರಿಶೀಲಿಸುವುದು. ಯಾವುದೇ ಅಧಿಕಾರಿ/ಸಿಬ್ಬಂದಿ ಸಾಮಾನ್ಯ ಭವಿಷ್ಯ ನಿಧಿ ಚಂದಾದಾರರಾಗದಿದ್ದಲ್ಲಿ, ನಿಯಮ 5 ರಲ್ಲಿನ ಸಂಬಂಧಪಟ್ಟ ಅಧಿಕಾರಿ/ಸಿಬ್ಬಂದಿಗಳ ಗಮನಕ್ಕೆ ತಂದು, ನಿಯಮ 11ರಂತೆ ಕನಿಷ್ಠ ವಂತಿಕೆಯನ್ನು ಅಥವಾ ಸಂಬಂಧಪಟ್ಟ ನೌಕರರ ಇಚ್ಛಾನುಸಾರ ಹೆಚ್ಚಿನ ವಂತಿಕೆಯನ್ನು ನಿಯಮಾನುಸಾರ ಪಾವತಿಸಲು ಸಾಮಾನ್ಯ ಭವಿಷ್ಯ ನಿಧಿಗೆ ಪ್ರವೇಶ ಪಡೆಯಲು ಸೆಪ್ಟಂಬರ್ 2013ರೊಳಗೆ ನಿಗದಿತ ನಮೂನೆಯಲ್ಲಿ ಅರ್ಜಿಯನ್ನು ಪಡೆದು ಮಹಾಲೇಖಪಾಲರ ಕಛೇರಿಗೆ ಅಗತ್ಯ ಕ್ರಮಕ್ಕಾಗಿ ಕಳುಹಿಸಿಕೊಡತಕ್ಕದ್ದು.

4. ರಾಜ್ಯ ಸಿವಿಲ್ ಸೇವೆಗೆ ದಿನಾಂಕ:01.04.2006ರಿಂದ ಹೊಸದಾಗಿ ನೇಮಕಗೊಳ್ಳುವ ಸರ್ಕಾರಿ ನೌಕರರುಗಳಿಗೆ ನೂತನ ಪಿಂಚಣಿ ಯೋಜನೆಯ ಕಡ್ಡಾಯವಾಗಿರುವುದರಿಂದ, ಈ ಸರ್ಕಾರಿ ನೌಕರರುಗಳಿಗೆ ಕರ್ನಾಟಕ ಸಾಮಾನ್ಯ ಭವಿಷ್ಯ ನಿಧಿ ನಿಯಮಗಳು, 1957 ಅನ್ವಯವಾಗುವುದಿಲ್ಲ. ಎಲ್ಲಾ ಹಣ ಸೆಳೆಯುವ ಮತ್ತು ಬಟವಾಡೆ ಮಾಡುವ ಅಧಿಕಾರಿಗಳು ಅಕ್ಟೋಬರ್ 15, 2013ರೊಳಗೆ ಮೇಲಿನಂತೆ ಕ್ರಮ ಪೂರ್ಣಗೊಳಿಸತಕ್ಕದ್ದು. ತಪ್ಪಿದಲ್ಲಿ, ಸಂಬಂಧಪಟ್ಟ ಹಣ ಸೆಳೆಯುವ ಮತ್ತು ಬಟವಾಡೆ ಮಾಡುವ ಅಧಿಕಾರಿಗಳನ್ನು ಹೊಣೆಗಾರರನ್ನಾಗಿ ಮಾಡಲಾಗುವುದು.

5. ಎಲ್ಲಾ ಇಲಾಖಾ ಮುಖ್ಯಸ್ಥರುಗಳು ತಮ್ಮ ಇಲಾಖೆಯ ಹಣ ಸೆಳೆಯುವ ಮತ್ತು ಬಟವಾಡೆ ಮಾಡುವ ಅಧಿಕಾರಿಗಳು ಮೇಲಿನಂತೆ ಕಾಲಮಿತಿಯೊಳಗೆ ಕ್ರಮ ಕೈಗೊಂಡಿರುವುದನ್ನು ಖಚಿತಪಡಿಸಿಕೊಳ್ಳುವಂತೆ ಕೋರಲಾಗಿದೆ.

(ಎನ್. ಲಕ್ಷ್ಮಣ)
ಸರ್ಕಾರದ ಅಧೀನ ಕಾರ್ಯದರ್ಶಿ,
ಆರ್ಥಿಕ ಇಲಾಖೆ(ಆಡಳಿತ ಮತ್ತು ಮುಂಗಡಗಳು)

30/9/2013

ಇವರಿಗೆ:
ಸಂಕಲನಕಾರರು, ರಾಜ್ಯ ಪತ್ರ, ಬೆಂಗಳೂರು – ಮುಂದಿನ ರಾಜ್ಯಪತ್ರದಲ್ಲಿ ಪ್ರಕಟಿಸಲು ಮತ್ತು 100 ಪ್ರತಿಗಳನ್ನು ಆರ್ಥಿಕ ಇಲಾಖೆ (ಮುಂಗಡ) ಕಳುಹಿಸಿಕೊಡುವಂತೆ ಕೋರಲಾಗಿದೆ.

ಪ್ರತಿಯನ್ನು:

1. ಮಹಾಲೇಖಪಾಲರು (ಲೆಕ್ಕಪತ್ರ & ತನಿಖೆ), ಕರ್ನಾಟಕ, ಬೆಂಗಳೂರು.
2. ಮುಖ್ಯ ಕಾರ್ಯದರ್ಶಿಗಳು, ಅಪರ ಮುಖ್ಯ ಕಾರ್ಯದರ್ಶಿಗಳು, ಅಮುಕಾ ಮತ್ತು ಅಭಿವೃದ್ಧಿ ಅಧಿಕಾರಿಗಳು, ವಿಧಾನಸೌಧ, ಬೆಂಗಳೂರು.
3. ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು,
4. ಘನತೆವೆತ್ತ ರಾಜ್ಯಪಾಲರ ಕಾರ್ಯದರ್ಶಿಗಳು, ರಾಜಭವನ, ಬೆಂಗಳೂರು,
5. ರಿಜಿಸ್ಟ್ರಾರ್, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು,
6. ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಬೆಂಗಳೂರು,
7. ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ ಮತ್ತು ವಿಧಾನ ಪರಿಷತ್ತು, ಬೆಂಗಳೂರು,
8. ರಿಜಿಸ್ಟ್ರಾರ್, ಕರ್ನಾಟಕ ಆಡಳಿತ ನ್ಯಾಯ ಮಂಡಳಿ, ಕೋರಮಂಗಲ, ಬೆಂಗಳೂರು,
9. ರಿಜಿಸ್ಟ್ರಾರ್, ಕರ್ನಾಟಕ ಲೋಕಾಯುಕ್ತ, ಬಹುಮಹಡಿ ಕಟ್ಟಡ, ಬೆಂಗಳೂರು,
10. ಎಲ್ಲಾ ಇಲಾಖಾ ಮುಖ್ಯಸ್ಥರುಗಳು,
11. ಎಲ್ಲಾ ಜಿಲ್ಲಾಧಿಕಾರಿಗಳು/ಜಿಲ್ಲಾ ಪಂಚಾಯತಿಯ ಎಲ್ಲಾ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳು,
12. ಆರ್ಥಿಕ ಇಲಾಖೆಯ ಗಣಕ ಕೋಶ-ಆರ್ಥಿಕ ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು,
13. ಬಿಡಿ ಪ್ರತಿಗಳು/ಶಾಖಾ ರಕ್ಷಕ ಕಡತ/ಕಛೇರಿ ಪ್ರತಿ.

**"ಪ್ರತಿ"**

ಸಂಖ್ಯೆ ಉತಇ/ತರಬೇತಿ/ಆಡಆತ-7/ವಿವ-153/13-14.

ಉದ್ಯೋಗ ಮತ್ತು ತರಬೇತಿ ನಿರ್ದೇಶನಾಲಯ,
ಕೌಶಲ್ಯ ಭವನ, ಡೈರಿ ವೃತ್ತ,
ಬನ್ನೇರುಘಟ್ಟ ರಸ್ತೆ, ಬೆಂಗಳೂರು-29,
ದಿನಾಂಕ: 27-11-2013.

ಸರ್ಕಾರದ ಸುತ್ತೋಲೆ ಸಂಖ್ಯೆ ಆಇ 26 ಮುಭನಿ 2013, ಬೆಂಗಳೂರು ದಿನಾಂಕ: 30-09-2013 ರ ಸುತ್ತೋಲೆಯಂತೆ ತಮ್ಮ ಅಧೀನದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅಧಿಕಾರಿ/ನೌಕರರ ಸಾಮಾನ್ಯ ಭವಿಷ್ಯ ನಿಧಿ ವಂತಿಗೆಯ ಕಟಾವಣೆ ಬಗ್ಗೆ ಹಣ ಸೆಳೆಯುವ/ಬಟವಾಡೆ ಮಾಡುವ ಅಧಿಕಾರಿಗಳು ಸೂಕ್ತ ಕ್ರಮ ಕೈಗೊಂಡು, ಕೈಗೊಂಡ ಕ್ರಮದ ಬಗ್ಗೆ ನಿರ್ದೇಶನಾಲಯಕ್ಕೆ ವರದಿ ಸಲ್ಲಿಸುವುದು.

ಸಹಾಯಕ ನಿರ್ದೇಶಕರು, (ಆಡಳಿತ),
ಉದ್ಯೋಗ ಮತ್ತು ತರಬೇತಿ.

ಗೆ,

1) ರಾಜ್ಯದಲ್ಲಿರುವ ಎಲ್ಲಾ 4 ವಿಭಾಗೀಯ ಕಛೇರಿಗಳಿಗೆ ಮಾಹಿತಿಗೆ ಹಾಗೂ ಮುಂದಿನ ಕ್ರಮಕ್ಕಾಗಿ.
2) ಎಲ್ಲಾ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಗಳ ಪ್ರಾಚಾರ್ಯರುಗಳಿಗೆ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ.
3) ಜಂಟಿ ನಿರ್ದೇಶಕರು (ತ), ಸ್ಟಾರ್ಕ್., ಮಳವಳ್ಳಿ/ಐ.ಟಿ.ಡಬ್ಲ್ಯೂ. ದಾವಣಗೆರೆ ಇವರ ಮಾಹಿತಿಗಾಗಿ.
4) ಆಡಳಿತಾಧಿಕಾರಿಗಳು, ನಿರ್ದೇಶನಾಲಯ ಇವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ.
5) ಕಛೇರಿ ಪ್ರತಿ.